2

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ - ಕೃಷಿ ಕಾಯ್ದೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 3/10/2020

# ಕೃಷಿ ಕಾಯ್ದೆ ವಿರುದ್ಧ ಕೈ ಮಸೂದೆ

3-10-20

**ನವದೆಹಲಿ/ಚಂಡೀಗಢ:** ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಮೂರು ಕೃಷಿ ಕಾಯ್ದೆ ವಿರುದ್ಧ ಸಿಡಿದು ನಿಂತಿರುವ ಕಾಂಗ್ರೆಸ್, ಪಕ್ಷ ಆಡಳಿತದಲ್ಲಿರುವ ರಾಜ್ಯಗಳಲ್ಲಿ ಜಾರಿಗೆ ತರುವ ನಿಟ್ಟಿನಲ್ಲಿ ಮಾದರಿ ಕಾನೂನಿನ ಕರಡು ಸಿದ್ಧಪಡಿಸಿದೆ. ಮೂಲಗಳು ಶುಕ್ರವಾರ ನವದೆಹಲಿಯಲ್ಲಿ ನೀಡಿದ ಮಾಹಿತಿ ಪ್ರಕಾರ, ಶೀಘ್ರವೇ ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಆಡಳಿತದಲ್ಲಿರುವ ರಾಜ್ಯಗಳಿಗೆ ಅವುಗಳನ್ನು ಕೇಂದ್ರ ಜಾರಿಗೆ ತಂದ ಕಾನೂನುಗಳ ಬದಲಾಗಿ ಅನುಷ್ಠಾನಗೊಳಿಸಲು ಕಳುಹಿಸಿಕೊಡಲಾಗುತ್ತದೆ.

ಸಂವಿಧಾನದ 254 (2) ವಿಧಿಯ ಅನ್ವಯ ರಾಜ್ಯ ಸರ್ಕಾರಗಳಿಗೆ ತಮ್ಮದೇ ಆದ ಕಾನೂನು ರಚಿಸಿ ಜಾರಿಗೊಳಿಸಲು ಅಧಿಕಾರ ಇದೆ. ಅದನ್ನು ಬಳಸಿಕೊಳ್ಳುವಂತೆ ಈಗಾಗಲೇ ಕಾಂಗ್ರೆಸ್ ಆಡಳಿತದ ರಾಜ್ಯಗಳಿಗೆ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಸೂಚನೆ ನೀಡಿದ್ದಾರೆ. ಕಾಂಗ್ರೆಸ್, ಮಿತ್ರ ಪಕ್ಷಗಳು ಆಡಳಿತದಲ್ಲಿರುವ ರಾಜ್ಯಗಳಲ್ಲಿ ತಮ್ಮದೇ ರೈತ ವಿಧೇಯಕಗಳನ್ನು ಮಂಡಿಸಿ ಅನುಮೋದನೆ ಪಡೆದುಕೊಳ್ಳಲಿವೆ. ಪಕ್ಷದ ನಾಯಕ ಡಾ. ಅಭಿಷೇಕ್ ಸಿಂಘ್ವಿ ಅದನ್ನು ಸಿದ್ಧಪಡಿಸಿದ್ದಾರೆ.